**ಕರ್ನಾಟಕ ಸರ್ಕಾರ**

ಸಂಖ್ಯೆ : ಪಿಡಿ8 : ಐಎಂಎಂ2002

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ : 02-07-2002

## ಸುತ್ತೋಲೆ

ವಿಷಯ :- ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ನಡೆಯುವ ಕೆಡಿಪಿ ಸಭೆಗಳಲ್ಲಿ ಕನ್ನಡ ಅನುಷ್ಠಾನದ ಪ್ರಗತಿಯನ್ನು ಒಂದು ಅಂಶವಾಗಿ ತೆಗೆದುಕೊಂಡು ಪರಿಶೀಲಿಸುವ ಬಗ್ಗೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಶಿಫಾರಸಿನನ್ವಯ ಸರ್ಕಾರವು ತಾಲ್ಲೂಕು ಮತ್ತು ಜಿಲ್ಲಾ ಮಟ್ಟಗಳಲ್ಲಿ ನಡೆಯುವ ಕೆಡಿಪಿ ಸಭೆಗಳಲ್ಲಿ ಕನ್ನಡ ಅನುಷ್ಠಾನದ ಪ್ರಗತಿಯನ್ನು ಒಂದು ಅಂಶವಾಗಿ ತೆಗೆದುಕೊಂಡು ಪರಿಶೀಲಿಸಬೇಕೆಂದು ತೀರ್ಮಾನ ಕೈಗೊಂಡಿದೆ. ಆದ್ದರಿಂದ ಈ ಸುತ್ತೋಲೆಗೆ ಲಗತ್ತಿಸಿರುವ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಕನ್ನಡ ಅನುಷ್ಠಾನದ ಬಗ್ಗೆ ಪ್ರಗತಿಯ ವರದಿಯನ್ನು ತಾಲ್ಲೂಕು ಮತ್ತು ಜಿಲ್ಲಾ ಮಟ್ಟಗಳಲ್ಲಿ ನಡೆಯುವ ಕೆಡಿಪಿ ಮಾಸಿಕ ಮತ್ತು ತ್ರೈಮಾಸಿಕ ಪರಿಶೀಲನಾ ಸಮಿತಿಗಳ ಸಭೆಗಳಲ್ಲಿ ಕಡ್ಡಾಯವಾಗಿ ಪರಿಶೀಲಿಸಬೇಕು. ಈ ರೀತಿ ಕನ್ನಡ ಅನುಷ್ಠಾನದ ಪ್ರಗತಿಯನ್ನು ಪರಿಣಾಮಕಾರಿಯಾಗಿ ಪರಿಶೀಲಿಸಲು ತಾಲ್ಲೂಕು ಮತ್ತು ಜಿಲ್ಲಾ ಮಟ್ಟಗಳಲ್ಲಿನ ಇಲಾಖೆಗಳ ಮತ್ತು ಸಂಸ್ಥೆಗಳ ಮುಖ್ಯಸ್ಥರುಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕೆಡಿಪಿ ಮಾಸಿಕ ಮತ್ತು ತ್ರೈಮಾಸಿಕ ಸಮಿತಿಗಳ ಸದಸ್ಯ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾಮಟ್ಟದ ಸಹಾಯಕ ನಿರ್ದೇಶಕರುಗಳು ಹಾಗೂ ಇತರೆ ಸಂಬಂಧಪಟ್ಟ ಅಧಿ

ಕಾರಿಗಳು ಕೆಳಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

೧) ತಾಲ್ಲೂಕು ಮಟ್ಟದ ಕೆಡಿಪಿ ಮಾಸಿಕ ಹಾಗು ತ್ರೈಮಾಸಿಕ ಪರಿಶೀಲನಾ ಸಮಿತಿಗಳ ಸಭೆಗಳಲ್ಲಿ ಕನ್ನಡ ಅನುಷ್ಠಾನದ ಪ್ರಗತಿಯ ಬಗ್ಗೆ ಪರಿಣಾಮಕಾರಿಯಾಗಿ ಪರಿಶೀಲಿಸಲು ಎಲ್ಲಾ ತಾಲ್ಲೂಕು ಮಟ್ಟದ ಇಲಾಖಾ ಹಾಗೂ ಸಂಸ್ಥೆಗಳ ಮುಖ್ಯಸ್ಥರುಗಳು ಈ ಸುತ್ತೋಲೆಗೆ ಲಗತ್ತಿಸಿರುವ ನಮೂನೆಯಲ್ಲಿ ಕನ್ನಡ ಅನುಷ್ಠಾನದ ಪ್ರಗತಿಯ ಬಗ್ಗೆ ಮಾಸಿಕ ವರದಿಗಳನ್ನು ಪ್ರತಿ ತಿಂಗಳು 4ನೇ ತಾರೀಖಿನೊಳಗೆ ತಪ್ಪದೇ ತಾಲ್ಲೂಕು ಮಟ್ಟದ ಕೆಡಿಪಿ ಮಾಸಿಕ ಹಾಗೂ ತ್ರೈಮಾಸಿಕ ಪರಿಶೀಲನಾ ಸಮಿತಿಗಳ ಸದಸ್ಯ ಕಾರ್ಯದರ್ಶಿಯಾಗಿರುವ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗೆ ಕಳುಹಿಸಿಕೊಡಬೇಕು, ಹಾಗೂ ಅದರ ಪ್ರತಿಯನ್ನು ತಮ್ಮ ಸಂಬಂಧಪಟ್ಟ ಜಿಲ್ಲಾ ಮಟ್ಟದ ಇಲಾಖಾ/ಸಂಸ್ಥೆಗಳ ಮುಖ್ಯಸ್ಥರುಗಳಿಗೆ ಕಳುಹಿಸಿ ಕೊಡಬೇಕು. ಈ ರೀತಿ ಸ್ವೀಕರಿಸಿದ ವರದಿಗಳನ್ನು ತಾಲ್ಲೂಕು ಪಂಚಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯು ಕ್ರೋಢೀಕರಿಸಿ ತಾಲ್ಲೂಕು ಮಟ್ಟದ ಕೆಡಿಪಿ ಮಾಸಿಕ ಹಾಗೂ ತ್ರೈಮಾಸಿಕ ಸಮಿತಿಗಳ ಸಭೆಗಳಿಗೆ ತಯಾರಿಸುವ ಕೆಡಿಪಿ ಮಾಸಿಕ ಹಾಗೂ ತ್ರೈಮಾಸಿಕ ಸಮಿತಿಗಳ ಸಭೆಗಳಿಗೆ ತಯಾರಿಸುವ ಕೆಡಿಪಿ ವಿಷಯ ಸೂಚಿ ಟಿಪ್ಪಣಿ (ಅಜೆಂಡಾ) ಯಲ್ಲಿ ಒಂದು ಅಂಶವಾಗಿ ಅಳವಡಿಸಿ ಮಂಡಿಸಬೇಕು ಹಾಗೂ ಹೀಗೆ ಮಂಡಿಸಿದ ವರದಿಯನ್ನು ಈ ಸಭೆಗಳಲ್ಲಿ ತಪ್ಪದೇ ಪರಿಶೀಲಿಸುವಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನು ನಿರ್ವಹಿಸಬೇಕು. ಇದರ ಜೊತೆಗೆ ಮಾಸಿಕ ಮತ್ತು ತ್ರೈಮಾಸಿಕ ಪರಿಶೀಲನಾ ಸಭೆಗಳಿಗೆ ಜಿಲ್ಲಾ ಮಟ್ಟದ ಕನ್ನಡ ಜಾಗೃತಿ ಸಮಿತಿಯ ಸಂಬಂಧಪಟ್ಟ ತಾಲ್ಲೂಕು ಪ್ರತಿನಿಧಿಗಳನ್ನು ಕಡ್ಡಾಯವಾಗಿ ಆಹ್ವಾನಿಸಬೇಕು.

೨) ಜಿಲ್ಲಾ ಮಟ್ಟದ ಕೆಡಿಪಿ ಮಾಸಿಕ ಹಾಗೂ ತ್ರೈಮಾಸಿಕ ಪರಿಶೀಲನಾ ಸಮಿತಿಗಳ ಸಭೆಗಳಲ್ಲಿ ಕನ್ನಡ ಅನುಷ್ಠಾನದ ಪ್ರಗತಿಯನ್ನು ಪರಿಣಾಮಕಾರಿಯಾಗಿ ಪರಿಶೀಲಿಸಲು ಎಲ್ಲಾ ಜಿಲ್ಲಾ ಮಟ್ಟದ ಇಲಾಖೆಗಳ ಹಾಗು ಸಂಸ್ಥೆಗಳ ಮುಖ್ಯಸ್ಥರುಗಳು ತಮ್ಮ ಜಿಲ್ಲಾ ಮಟ್ಟದ ಕಛೇರಿಯಲ್ಲಿನ ಕನ್ನಡ ಅನುಷ್ಠಾನದ ಬಗ್ಗೆ ಈ ಸುತ್ತೋಲೆಗೆ ಲಗತ್ತಿಸಿರುವ ನಮೂನೆಯಲ್ಲಿ ಮಾಸಿಕ ವರದಿಗಳನ್ನು ತಯಾರಿಸಬೇಕು. ಇದರ ಜೊತೆಗೆ ತಮ್ಮ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿಗಳಿಂದ ಸ್ವೀಕರಿಸಿದ ವರದಿಗಳನ್ನು ಕ್ರೋಢೀಕರಿಸಿ ಈ ಸುತ್ತೋಲೆಗೆ

ಲಗತ್ತಿಸಿರುವ ನಮೂನೆಯಲ್ಲಿ ತಮ್ಮ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ವಿವರಗಳನ್ನೊಳಗೊಂಡ ಪ್ರಗತಿಯ ಮಾಸಿಕ ವರದಿಯನ್ನು ತಯಾರಿಸಬೇಕು. ಈ ಎರಡು ವರದಿಗಳನ್ನು ತಪ್ಪದೆ ಪ್ರತಿ ತಿಂಗಳು 7ನೇ ತಾರೀಖಿನೊಳಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾ ಮಟ್ಟದ ಸಹಾಯಕ ನಿರ್ದೇಶಕರಿಗೆ ಹಾಗೂ ತಮ್ಮ ಸಂಬಂಧಪಟ್ಟ ರಾಜ್ಯಮಟ್ಟದ ಇಲಾಖಾ ಸಂಸ್ಥೆಗಳ ಮುಖ್ಯಸ್ಥರುಗಳಿಗೆ ಕಳುಹಿಸಿಕೊಡಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾಮಟ್ಟದ ಸಹಾಯಕ ನಿರ್ದೇಶಕರುಗಳು ಈ ರೀತಿ ಸ್ವೀಕರಿಸಿದ ವರದಿಗಳನ್ನು ಕ್ರೋಢೀಕರಿಸಬೇಕು. ಹೀಗೆ ಕ್ರೋಢೀಕರಿಸಿದ ಮೇಲೆ ತಿಳಿಸಿದ ಎರಡು ವರದಿಗಳನ್ನು ಪ್ರತಿ ತಿಂಗಳು 9ನೇ ತಾರೀಖಿನೊಳಗೆ ತಮ್ಮ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದರ ಪ್ರತಿಯನ್ನು ಜಿಲ್ಲಾ ಪಂಚಾಯಿತಿಯ ಮುಖ್ಯ ಯೋಜನಾಧಿಕಾರಿಗೆ, ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಹಾಗೂ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ತಪ್ಪದೇ ಕಳುಹಿಸಿಕೊಡಬೇಕು. ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯಿತಿಯ ಮುಖ್ಯ ಯೋಜನಾಧಿಕಾರಿಯವರ ಮೂಲಕ ಈ ರೀತಿ ಸ್ವೀಕರಿಸಿದ ಕ್ರೋಢೀಕೃತ ವರದಿಯನ್ನು ಜಿಲ್ಲಾ ಮಟ್ಟದ ಮಾಸಿಕ ಹಾಗೂ ತ್ರೈಮಾಸಿಕ ಕೆಡಿಪಿ ಪರಿಶೀಲನಾ ಸಮಿತಿಗಳ ಸಭೆಗಳಿಗೆ ತಯಾರಿಸುವ ಕೆಡಿಪಿ ವಿಷಯ ಸೂಚಿ ಟಿಪ್ಪಣಿಯಲ್ಲಿ (ಅಜೆಂಡಾ) ತಪ್ಪದೇ ಒಂದು ಅಂಶವಾಗಿ ಅಳವಡಿಸಿ ಮಂಡಿಸುವಂತೆ ನೋಡಿಕೊಳ್ಳಬೇಕು. ಹೀಗೆ ಮಂಡಿಸಿದ ವರದಿಯನ್ನು ಈ ಸಭೆಗಳಲ್ಲಿ ತಪ್ಪದೇ ಪರಿಶೀಲಿಸುವಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನು ಸಹ ನಿರ್ವಹಿಸಬೇಕು. ಈ ಮಾಸಿಕ ಮತ್ತು ತ್ರೈಮಾಸಿಕ ಸಭೆಗಳಿಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ಕನ್ನಡ ಜಾಗೃತಿ ಸಮಿತಿಯ ಜಿಲ್ಲಾ ಕೇಂದ್ರದ ಪ್ರತಿನಿಧಿಗಳನ್ನು ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಆಯಾ ಜಿಲ್ಲೆಯ ಉಸ್ತುವಾರಿ ಸದಸ್ಯರನ್ನು ಕಡ್ಡಾಯವಾಗಿ ಆಹ್ವಾನಿಸಬೆಕು.

೩) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾ ಮಟ್ಟದ ಸಹಾಯಕ ನಿರ್ದೇಶಕರುಗಳು ಈ ವಿಷಯದ ಬಗ್ಗೆ ಸಮನ್ವಯ ಅಧಿಕಾರಿಗಳಿಗೆ ಜಿಲ್ಲಾ ಮಟ್ಟದಲ್ಲಿ ನಡೆಯುವ ಪ್ರತಿಯೊಂದು ಕೆಡಿಪಿ ಮಾಸಿಕ ಹಾಗೂ ತ್ರೈಮಾಸಿಕ ಸಮಿತಿಗಳ ಸಭೆಗಳಲ್ಲಿ ತಪ್ಪದೇ ಭಾಗವಹಿಸಿ ಕನ್ನಡ ಅನುಷ್ಠಾನದ ಪ್ರಗತಿಯನ್ನು

ಪರಿಶೀಲಿಸಿದ ಬಗ್ಗೆ ಸಭೆಗಳು ಮುಗಿದ 3 ದಿನಗಳೊಳಗೆ ಸಂಕ್ಷಿಪ್ತ ವರದಿಯನ್ನು ತಯಾರಿಸಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರಿಗೆ ಹಾಗೂ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳಿಗೆ ತಪ್ಪದೇ ಕಳುಹಿಸಿ ಕೊಡಬೇಕು.

೪) ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಜಿಲ್ಲೆಗಳಲ್ಲಿ ತಮ್ಮ ಜಿಲ್ಲಾ ಮಟ್ಟದ ಸಹಾಯಕ ನಿರ್ದೇಶಕರುಗಳು ಮೇಲೆ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ನೋಡಿಕೊಳ್ಳುವ ಉಸ್ತುವಾಗಿ ಕಾರ್ಯವನ್ನು ನಿರ್ವಹಿಸಬೇಕು.

೫) ಸಂಬಂಧಪಟ್ಟ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಇಲಾಖೆಗಳ ಹಾಗೂ ಸಂಸ್ಥೆಗಳ ಮುಖ್ಯಸ್ಥರುಗಳು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾ ಮಟ್ಟದ ಸಹಾಯಕ ನಿರ್ದೇಶಕರುಗಳು ಮೇಲಿನ ಸೂಚನೆಗಳನ್ನು ಪಾಲಿಸುವಲ್ಲಿ ವಿಫಲರಾದರೆ ಅವರುಗಳ ಮೇಲೆ ಸರ್ಕಾರಿ ಸುತ್ತೋಲೆಗಳು ಸಂಖ್ಯೆ : ಯೋ 606 ಯೋವಿವಿ 97 ದಿನಾಂಕ 3-11-97 ಮತ್ತು ಸಂಖ್ಯೆ ಪಿಡಿ 5 ಐ.ಎಂ.ಎಂ. 2002 ದಿನಾಂಕ 15-2-2002ರಲ್ಲಿ ನೀಡಿರುವ ಸೂಚನೆಗಳನ್ವಯ, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನಿಯಮಾನುಸಾರ ಶಿಸ್ತಿನ ಕ್ರಮ ಕೈಗೊಳ್ಳಬೇಕು.

ಸಹಿ/-

(ಅಭಿಜಿತ್ ದಾಸ್ ಗುಪ್ತ)

ಸರ್ಕಾರದ ಪ್ರಧಾನ ಕಾರ್ಯದರ್ಶಿ,

ಯೋಜನಾ, ಸಾಂಖ್ಯಿಕ ಹಾಗೂ ವಿಜ್ಞಾನ

ಮತ್ತು ತಂತ್ರಜ್ಞಾನ ಇಲಾಖೆ.

ಇವರುಗಳಿಗೆ :

೧) ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

೨) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

೩.) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

೪) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಯೋಜನಾಧಿಕಾರಿಗಳು

೫) ಎಲ್ಲಾ ಜಿಲ್ಲಾ ಮಟ್ಟದ ಇಲಾಖೆ ಮುಖ್ಯಸ್ಥರುಗಳು

೬) ಎಲ್ಲಾ ಜಿಲ್ಲಾ ಮಟ್ಟದ ರಾಜ್ಯ ಸಾರ್ವಜನಿಕ ವಲಯದ ಉದ್ಯಮಗಳ ಮುಖ್ಯಸ್ಥರುಗಳು

೭) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಎಲ್ಲಾ ಜಿಲ್ಲಾ ಮಟ್ಟದ ಸಹಾಯಕ ನಿರ್ದೇಶಕರುಗಳು

೮) ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

೯) ಎಲ್ಲಾ ತಾಲ್ಲೂಕು ಮಟ್ಟದ ಇಲಾಖಾ ಮುಖ್ಯಸ್ಥರುಗಳು

೧೦) ಎಲ್ಲಾ ತಾಲ್ಲೂಕು ಮಟ್ಟದ ರಾಜ್ಯ ಸಾರ್ವಜನಿಕ ವಲಯದ ಉದ್ಯಮಗಳ ಮುಖ್ಯಸ್ಥರುಗಳು

೧೧) ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು.

ಪ್ರತಿಯನ್ನು ಮಾಹಿತಿಗಾಗಿ :

೧) ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ

೨) ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿ

೩.) ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತ ಕಾರ್ಯದರ್ಶಿಗಳು

೪) ಯೋಜನೆ, ಸಾಂಸ್ಥಿಕ ಹಣಕಾಸು ಮತ್ತು ಸಾಂಖ್ಯಿಕ ಸಚಿವರ ಆಪ್ತ ಕಾರ್ಯದರ್ಶಿ

೫) ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಆಪ್ತ ಕಾರ್ಯದರ್ಶಿ

೬) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು

೭) ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಅಧ್ಯಕ್ಷರುಗಳು

೮) ತಾಲ್ಲೂಕು ಮಟ್ಟದ ಕೆ.ಡಿ.ಪಿ. ತ್ರೈಮಾಸಿಕ ಪರಿಶೀಲನಾ ಸಮಿತಿಗಳ

ಅಧ್ಯಕ್ಷರುಗಳಾಗಿರುವ ವಿಧಾನಸಭಾ ಸದಸ್ಯರುಗಳು

೯) ಮುಖ್ಯ ಕಾರ್ಯದರ್ಶಿ

೧೦) ಅಪರ ಮುಖ್ಯ ಕಾರ್ಯದರ್ಶಿ

೧೧) ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು

೧೨) ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

೧೩.) ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ

೧೪) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು

೧೫) ಎಲ್ಲಾ ರಾಜ್ಯ ಮಟ್ಟದ ಇಲಾಖಾ ಮುಖ್ಯಸ್ಥರುಗಳು

೧೬) ಎಲ್ಲಾ ರಾಜ್ಯಮಟ್ಟದ ಸಾರ್ವಜನಿಕ ವಲಯದ ಉದ್ಯಮಗಳ ವ್ಯವಸ್ಥಾಪಕ ನಿರ್ದೇಶಕರುಗಳು

೧೭) ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ

೧೮) ಎಲ್ಲಾ ವಿಭಾಗಾಧಿಕಾರಿಗಳು

೧೯) ಎಲ್ಲಾ ಜಿಲ್ಲಾಧಿಕಾರಿಗಳು

೨೦) ಎಲ್ಲಾ ಉಪವಿಭಾಗಾಧಿಕಾರಿಗಳು

೨೧) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ರಾಜ್ಯಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಮತ್ತು 5000 ಪ್ರತಿಗಳನ್ನು ಸರಬರಾಜು ಮಾಡುವುದಕ್ಕಾಗಿ.